# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.

**ಸಿ.ಸಿ. 714/2024**

ಪಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ದ-

ಆರೋಪಿ/ತರು ಃ ಸುನೀಲ್

-ಃದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಸುನೀಲ್ ಬಿನ್ ಲೇಟ್ ವಿಂಕಾತಪ್ಪ, 25 ವರ್ಷ,
ವಾಸಃ ಕೆ ಬಿ ಎಸ್ ಸ್ಟೇಷನ್, ದಾವಣಗೆರೆ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ 13.09.2024 ರಂದು ರಾತ್ರಿ 9-00 ರ ಸಮಯದಲ್ಲಿ ತರೀಕೆರೆ ಠಾಣಾ ವ್ಯಾಪ್ತಿಯ ತರೀಕೆರೆ ಪಟ್ಟಣದ ಸ್ಟಾರ್ ಶಾಮಿಯಾನಕ್ಕೆ ಚಾಸಾ-1 ಮತ್ತು 2 ರವರುಗಳು ಗಣೇಶನ ಪ್ರತಿಷ್ಠಾಪನ ಕಾರ್ಯಕ್ರಮಕ್ಕೆ ತಂದಿದ್ದ ಶಾಮಿಯಾನವನ್ನು ವಾಪಸ್ ಕೊಡಲೆಂದು ಹೋಗಿದ್ದು, ಅಂಗಡಿಯು ತೆರದಿದ್ದು, ಅಂಗಡಿಯಲ್ಲಿ ಯಾರು ಇರಲಿಲ್ಲ ಅಷ್ಟರಲ್ಲಿ ಶಾಮಿಯಾನದ ಅಂಗಡಿಯ ಪಕ್ಕದಲ್ಲಿ ಕುಳಿತಿದ್ದ ಆರೋಪಿಯಾದ ನೀವು ಚಾಸಾ-2 ರವರನ್ನು ನೋಡಿ ನನ್ನ ಹತ್ತಿರನೇ ಕೊಡೋ ಅವರು ಇಲ್ಲ ಎಂದು ಏರುಧ್ವನಿಯಲ್ಲಿ ಕೇಳಿದ್ದು, ಅದಕ್ಕೆ ಚಾಸಾ-2 ರವರು ಶಾಮಿಯಾನದ ಅಂಗಡಿಯ ಮಾಲೀಕರು ಬರಲಿ ಎಂದು ಹೇಳಿದ್ದಕ್ಕೆ ಆರೋಪಿಯಾದ ನೀವು ಚಾಸಾ-2 ರವರಿಗೆ ಸೂಳೆಮಗನೇ ಬೋಳಿಮಗನೆ ಎಂದು ಅವಾಚ್ಯವಾಗಿ ಬೈದಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.**352** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿಯಾದ ನೀವು ಕೈಯಿಂದ ಚಾಸಾ-2 ರವರ ಮುಖಕ್ಕೆ, ಮೈಕೈಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು

ಮಾಡಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.**115(2)** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿಯಾದ ನೀವು ಕಬ್ಬಿಣದ ರಾಡಿನಿಂದ ಚಾಸಾ-2 ರವರ ತಲೆಗೆ ಹೊಡೆದು ಸಾಮಾನ್ಯ ಸ್ವರೂಪದ ರಕ್ತಗಾಯವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.**118(1)** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿಯಾದ ನೀವು ಚಾಸಾ-2 ರವರಿಗೆ ನಿನ್ನನ್ನು ಇಷ್ಟಕ್ಕೆ ಬಿಡುವುದಿಲ್ಲ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.**351(2)** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿಃ05.08.2025

ಸಹಿ/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ05.08.2025

ಸಹಿ/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ